**ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ,**

**ಸಕಲೇಶಪುರ**

**C.C.No.2/2023**

| | | |
|---|---|---|
| **ಹೆಸರುಃ** | **ಮಂಜುನಾಥ** | **CW-6** |
| **ತಂದೆ/ಗಂಡ ಹೆಸರುಃ** | **ಹಾಲಪ್ಪಗೌಡ** | **PW-5** |
| **ವಯಸ್ಸುಃ** | **63 ವರ್ಷ** | |
| **ವೃತ್ತಿಃ** | **ವ್ಯವಸಾಯ** | |
| **ವಿಳಾಸಃ** | **ಅಚ್ಚನಹಳ್ಳಿ ಗ್ರಾಮ** | **ದಿನಾಂಕಃ 19.01.2026** |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ಯವರಿಂದ.**

ಸಾಕ್ಷಿಯು ಅಮಾನತ್ತು ಪಂಚನಾಮೆಯನ್ನು ನೋಡಿ ಗುರುತಿಸಿದ್ದು, ಅದನ್ನು ನಿ ಪಿ 4 ಎಂದು, ಸಹಿಯನ್ನು ನಿ ಪಿ 4 ಬಿ ಎಂದು ಗುರುತಿಸಲಾಯಿತು. 2 ವರ್ಷಗಳ ಹಿಂದೆ ಅಚ್ಚನಹಳ್ಳಿ ಗ್ರಾಮದಲ್ಲಿ ಸಹಿ ಮಾಡಿರುತ್ತೇನೆ. ಆ ಸಮಯದಲ್ಲಿ ನನ್ನ ಜೊತೆ ಯಾರು ಇರಲಿಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ಜಪ್ತು ಪಡಿಸಿಲ್ಲ. ಸಾಕ್ಷಿಯು ಅಮಾನತ್ತು ಪಂಚನಾಮೆ ಸಮಯದ ಪೋಟೋವನ್ನು ನೋಡಿ ಗುರುತಿಸಿರುತ್ತಾರೆ. ಪೋಟೋದಲ್ಲಿ 1 ನೇ ಆರೋಪಿ ಮತ್ತು ಚಾಸಾ 4 ರವರು ಇರುತ್ತಾರೆ. ಪೋಟೋವನ್ನು ಸಕಲೇಶಪುರ ಠಾಣೆಯಲ್ಲಿ ತೆಗೆದಿರುತ್ತಾರೆ. 1 ನೇ ಆರೋಪಿ ಕೈಯಲ್ಲಿ ಬಂದೂಕು ಇರುತ್ತದೆ. ಸದರಿ ಬಂದೂಕನ್ನು ನೋಡಿದರೆ ಗುರುತಿಸಲು ಆಗುವುದಿಲ್ಲ.

***(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ ಸ ಅ ಅವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)***

**ಪಾಟೀ ಸವಾಲುಃ ಮಾನ್ಯ ಎ ಪಿ ಪಿ ಯವರಿಂದ.**

ದಿಃ *29.03.2022* ರಲ್ಲಿ ಬೆ *10* ರಿಂದ *11* ರ ಸಮಯದಲ್ಲಿ ಸಕಲೇಶಪುರ ಗ್ರಾಮಾಂತರ ಠಾಣೆಯಲ್ಲಿ *1* ನೇ ಆರೋಪಿ ಹಾಜರುಪಡಿಸಿದಂತೆ ಬಂದೂಕನ್ನು ನನ್ನ ಸಮಕ್ಷಮ ವಶಪಡಿಸಿಕೊಂಡು ನಿ ಪಿ *4* ರಂತೆ ಪಂಚನಾಮೆ ಮಾಡಿರುತ್ತಾರೆಂದರೆ ಸರಿಯಲ್ಲ. ಅದೇ ಸಮಯದಲ್ಲಿ ನನ್ನ ಫೋಟೊ ತೆಗೆದಿರುತ್ತಾರೆಂದರೆ ಸರಿಯಲ್ಲ. ನನ್ನ ಸಮಕ್ಷಮ ನಿ ಪಿ *4* ರಂತೆ ಪಂಚನಾಮೆ ಮಾಡಿದ್ದರೂ ಸಹ ಮತ್ತು ಫೋಟೋ ತೆಗೆದಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ ಇಲ್ಲ**

**ಮರು ವಿಚಾರಣೆಃ ಇಲ್ಲ**

ಉಕ್ತ ಲೇಖನದಂತೆ ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

**ಓ ಹೆ ಕೇ ಸ ಇ**

ಸಹಿ/–

**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆ.ಎಂ.ಎಫ್.ಸಿ**
**ಸಕಲೇಶಪುರ**